# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೇಳನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಸೋಮವಾರ, ದಿನಾಂಕ:08ನೇ ಡಿಸೆಂಬರ್, 2025**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಸಂತಾಪ ಸೂಚನೆಗಳು

### 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

### 03. ಶೂನ್ಯವೇಳೆ ಪ್ರಸ್ತಾವಗಳು

### 04. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

### 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಡಿ.ಎಸ್. ಅರುಣ್** ಅವರು ನಗರಾಭಿವೃದ್ಧಿ ಇಲಾಖೆಯಿಂದ ಹಂಚಿಕೆ ಮಾಡುವ ಸಿ.ಎ. ನಿವೇಶನಗಳಿಗೆ ಸಾರ್ವಜನಿಕರು ನಿರಾಸಕ್ತಿ ತೋರಿಸುತ್ತಿರುವ ಬಗ್ಗೆ ಹಾಗೂ ಗುತ್ತಿಗೆಯನ್ನು ವಿಸ್ತರಿಸುವ ಪ್ರಕ್ರಿಯೆಯಲ್ಲಿ ಇಲಾಖೆಯು ಸಮರ್ಪಕವಾದ ನೀತಿಯನ್ನು ಅನುಸರಿಸುತ್ತಿಲ್ಲದಿರುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರ ಗಮನ ಸೆಳೆಯುವುದು.

..2..

೦೨. **ಶ್ರೀ ಗೋವಿಂದರಾಜು** ಅವರು ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ರಾಜ್ಯದ 32 ಕಡೆಗಳಲ್ಲಿ ಸುಮಾರು 784 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಶ್ರಮಿಕ ವಸತಿ ಸಹಿತ ಶಾಲೆಗಳ ಟೆಂಡರ್ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿರುವ ಬಗ್ಗೆ ಮಾನ್ಯ ಕಾರ್ಮಿಕ ಸಚಿವರ ಗಮನ ಸೆಳೆಯುವುದು.

೦೩. **ಶ್ರೀ ಬಸನಗೌಡ ಬಾದರ್ಲಿ** ಅವರು ಆಹಾರ ಪದಾರ್ಥಗಳನ್ನು ಸಂರಕ್ಷಿಸುವ ಉದ್ದೇಶದಿಂದ ಸಿಂಧನೂರಿನ ಹೃದಯ ಭಾಗದಲ್ಲಿ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ವತಿಯಿಂದ ನಿರ್ಮಾಣ ಮಾಡಲಾಗಿರುವ 40 ವರ್ಷಗಳ ಹಿಂದಿನ ಗೋದಾಮು ಶಿಥಿಲಾವಸ್ಥೆಯಲ್ಲಿದ್ದು, ಸದರಿ ಜಾಗವನ್ನು ಸಂರಕ್ಷಣೆ ಮಾಡಿ ಸರ್ಕಾರದ ಇನ್ನಿತರೆ ಅಗತ್ಯ ಕಟ್ಟಡಗಳ ನಿರ್ಮಾಣಕ್ಕೆ ಬಳಸಿಕೊಳ್ಳುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1. **ಶ್ರೀಯುತರುಗಳಾದ ಪುಟ್ಟಣ್ಣ, ಶಶೀಲ್ ಜಿ. ನಮೋಶಿ, ಎಸ್.ವ್ಹಿ. ಸಂಕನೂರ ಮತ್ತು ಎಸ್.ಎಲ್. ಭೋಜೇಗೌಡ** ಅವರುಗಳು ಖಾಸಗಿ ಅನುದಾನಿತ/ಅನುದಾನ ರಹಿತ ಶಾಲೆಗಳ ಪ್ರಥಮ ಮಾನ್ಯತೆ ಹಾಗೂ ಮಾನ್ಯತೆ ನವೀಕರಣಕ್ಕೆ ಸಂಬಂಧಿಸಿದಂತೆ ಸರ್ಕಾರವು ಹೊರಡಿಸಿರುವ ಆದೇಶ ಸಂಖ್ಯೆ:ಇಡಿ/709/ಪಿಜಿಸಿ/2017, ದಿನಾಂಕ:08.03.2018ರಲ್ಲಿ ಉಲ್ಲೇಖಿಸಲಾಗಿರುವ ಶಾಲೆಗಳ ಮಾನ್ಯತೆ ನವೀಕರಣದ ನಿಯಮಗಳನ್ನು ಸಡಿಲಗೊಳಿಸುವ ವಿಷಯದ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು)

೦2. **ಶ್ರೀ ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಶ್ರೀ ಕೆ.ಎಸ್. ನವೀನ್** ಅವರುಗಳು ರಾಜ್ಯದಲ್ಲಿ ಮದ್ಯಪಾನ ಸೇವನೆ ಮಾಡುತ್ತಿರುವವರು ಲಿವರ್ ಸಿರೋಸಿಸ್/ಜಾಂಡೀಸ್ ಎಂಬ ಪಿತ್ತಕೋಶ ಖಾಯಿಲೆಯಿಂದ ಬಳಲುತ್ತಿದ್ದು, ಅವರುಗಳ ಉತ್ತಮ ಚಿಕಿತ್ಸೆಗಾಗಿ ಅಬಕಾರಿ ಇಲಾಖೆಯ ಆದಾಯದ ಕನಿಷ್ಠ ಶೇ.20ರಷ್ಟು ಮೊತ್ತವನ್ನು ವಿನಿಯೋಗಿಸುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಅಬಕಾರಿ ಸಚಿವರು)

೦3. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿ ವಸತಿ ಹಾಗೂ ಜಮೀನುಗಳನ್ನು ಕಳೆದುಕೊಂಡ ರೈತರಿಗೆ ಪುನರ್ ವಸತಿ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಉಪಮುಖ್ಯಮಂತ್ರಿಗಳು)

೦4. **ಶ್ರೀಯುತರುಗಳಾದ ಎಸ್.ಎಲ್. ಭೋಜೇಗೌಡ, ಪುಟ್ಟಣ್ಣ, ಶಶೀಲ್ ಜಿ. ನಮೋಶಿ ಮತ್ತು ಎಸ್.ವ್ಹಿ. ಸಂಕನೂರ** ಅವರುಗಳು ಸರ್ಕಾರಿ ಶಾಲೆ/ಅನುದಾನಿತ/ಅನುದಾನ ರಹಿತ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳು ಕಾಲಕಾಲಕ್ಕೆ ಸಿಗಬೇಕಾದ ಬಡ್ತಿಯಿಂದ ವಂಚಿತರಾಗಿರುವುದನ್ನೊಳಗೊಂಡಂತೆ ಇನ್ನಿತರೆ ಸೌಲಭ್ಯಗಳು ದೊರಕದೆ ತೀವ್ರ ಸಮಸ್ಯೆಗಳನ್ನು ಎದುರಿಸುತ್ತಿರುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು)

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**